ಸಹಕಾರಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿ

1025 (623) ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗ) : ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕೋಡಿ ವಿಭಾಗದ ಸಹಕಾರಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿ ಪ್ರದೇಶದಲ್ಲಿನ ರಸ್ತೆಗಳ ಅಭಿವೃದ್ಧಿಗೆ ಕಳೆದ 3 ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಅಂದಾಜು ವೆಚ್ಚದಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ? ಎಷ್ಟು ಅನುದಾನವನ್ನು ಇಲ್ಲಿಯವರೆಗೆ ಬಿಡುಗಡೆ ಮಾಡಲಾಗಿದೆ (ಆದೇಶ ಪ್ರತಿಗಳೊಂದಿಗೆ ವಿವರ ನೀಡುವುದು)?

ಆ) ಗುತ್ತಿಗೆದಾರರಿಗೆ ಬಿಲ್ ಪಾವತಿಸದೇ ಇರುವುದರಿಂದ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತವಾಗಿ, ಈ ಸಹಕಾರಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿನ ರೈತರು ಬೆಳೆದ ಬೆಳೆಗಳ ಸಾಗಾಣಿಕೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ? ಬಂದಿದ್ದಲ್ಲಿ ಕೈಗೊಳ್ಳಲಾಗಿರುವ ಕ್ರಮವೇನು?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು) :

ಅ) ಚಿಕ್ಕೋಡಿ ವಿಭಾಗದ ಸಹಕಾರಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಮತ್ತು ಹಣ ಬಿಡುಗಡೆ ಮಾಡಿರುವ ವಿವರ.

(ರೂ. ಲಕ್ಷಗಳಲ್ಲಿ)

ಕಾರ್ಖಾನೆಯ ಹೆಸರು	ಕೈಗೊಂಡಿರುವ ಕಾಮಗಾರಿಗಳ ಮೊತ್ತ		
	2006–07	2007–08	2008–09
ಉಗಾರ್ ಶುಗರ್ಸ್	–	20.00	–
ಹಾಲಸಿದ್ದನಾಥ ಸ.ಸ.ಕಾ	8.45	–	–
ಘಟಪ್ರಭಾ ಸ.ಸ.ಕಾ	18.14	–	–
ದೂದ್ ಗಂಗಾ ಕೃಷ್ಣಾ ಸ.ಸ.ಕಾ	22.40	–	–
ಗೋದಾವರಿ ಶುಗರ್ಸ್	38.04	50.50	–

ವೆಂಕಟೇಶ್ವರ ಪವರ್ ಪ್ರಾಜೆಕ್ಟ್	7.64	–	–
ಒಟ್ಟು	**94.67**	**70.50**	–

ವರ್ಷ	ಕಾರ್ಖಾನೆಯ ಹೆಸರು	ಬಿಡುಗಡೆ ಮಾಡಿದ ಮೊತ್ತ	ಷರಾ
2006–07	ಗೋದಾವರಿ ಶುಗರ್ಸ್	35.20	2000–01ನೇ ಸಾಲಿಗೆ ಸಂಬಂಧಪಟ್ಟ ಕಾಮಗಾರಿಗಳು
2007–08	ಗೋದಾವರಿ ಶುಗರ್ಸ್	36.97	1998–99, 1999–2000 & 2001–02ನೇ ಸಾಲಿಗೆ ಸಂಬಂಧಿಸಿದ ಕಾಮಗಾರಿಗಳು
2008–09	ಗೋದಾವರಿ ಶುಗರ್ಸ್	32.69	1999–2000ನೇ ಸಾಲಿಗೆ ಸಂಬಂಧಿಸಿದ ಕಾಮಗಾರಿಗಳು

ಹಣ ಬಿಡುಗಡೆಯ ಆದೇಶದ ಪ್ರತಿಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಸರ್ಕಾರದ ಗಮನಕ್ಕೆ ಬಂದಿದೆ. 2009–10ನೇ ಸಾಲಿನ ಅನುದಾನದಲ್ಲಿ 165.00 ಲಕ್ಷ ರೂ.ಗಳನ್ನು ಈ ಉದ್ದೇಶಕ್ಕಾಗಿ ಒದಗಿಸಲಾಗಿದ್ದು, ಇದರಲ್ಲಿ 41.25 ಲಕ್ಷ ರೂ.ಗಳನ್ನು ಬಿಡುಗಡೆಯಗೊಳಿಸಿದ್ದು, ಬಾಕಿ 123.75 ಲಕ್ಷ ರೂ.ಗಳ ಬಿಡುಗಡೆಗೆ ಆದೇಶ ಹೊರಡಿಸಲಾಗುತ್ತಿದೆ.

1999–2000 ರಿಂದ 2003–04ರವರೆವಿಗೆ ಹಾಗೂ 2004–05 ರಿಂದ 2006–07ರವರೆವಿಗೂ ಸೇರಿ ಒಟ್ಟು 2250.59 ಲಕ್ಷ ರೂ.ಗಳನ್ನು ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಗೊಳಿಸಬೇಕಾಗಿದ್ದು ಈ ಸಂಬಂಧ ಆರ್ಥಿಕ ಇಲಾಖೆಯನ್ನು ಹಣ ಬಿಡುಗಡೆ ಮಾಡಲು ಕೋರಲಾಗಿರುತ್ತದೆ.

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆಗಳ ಕಾಮಗಾರಿ ಅನುಷ್ಠಾನಕ್ಕಾಗಿ 2008–09ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :

1. ಆಯುಕ್ತರು ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕ ರವರ ಪತ್ರ ಸಂಖ್ಯೆ: ಡಿಎಸ್‌ಕೆ/ರಕರ/ಅನುದಾನ/ 2008–09, ದಿನಾಂಕ: 25–04–2008.
2. ಪರಿಷ್ಕೃತ ಸರ್ಕಾರದ ಆದೇಶ ಸಂಖ್ಯೆ: ಸಿಐ 174 ಆಂಆಸ (1) 2008, ದಿನಾಂಕ: 18–09–2008.
3. ಸರ್ಕಾರದ ಆದೇಶ ಸಂಖ್ಯೆ:ಸಿಐ 93 ಎಸ್‌ಜಿಎಫ್ 2008, ದಿನಾಂಕ: 24–06–2008.
4. ಸರ್ಕಾರದ ಆದೇಶ ಸಂಖ್ಯೆ:ಸಿಐ 93 ಎಸ್‌ಜಿಎಫ್ 2008, ದಿನಾಂಕ: 02–08–2008.

******

ಪ್ರಸ್ತಾವನೆ :–

ರಾಜ್ಯದ ಈ ಕೆಳಕಂಡ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆ ಕಾಮಗಾರಿಗಳ ಅನುಷ್ಠಾನಕ್ಕಾಗಿ 2008–09ನೇ ಸಾಲಿನಲ್ಲಿ ಒದಗಿಸಲಾಗಿರುವ ರೂ.160/– ಲಕ್ಷಗಳಲ್ಲಿ ರೂ.159.78 ಲಕ್ಷಗಳನ್ನು ಬಿಡುಗಡೆಗೊಳಿಸಲು ಸಕ್ಕರೆ ನಿರ್ದೇಶಕರು ಮೇಲೆ ಓದಲಾದ ಉಲ್ಲೇಖ (1) ರ ದಿನಾಂಕ: 25–04–2008ರ ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ.

(ರೂ.ಲಕ್ಷಗಳಲ್ಲಿ)

ಕ್ರ ಸಂ.	ಕಾರ್ಖಾನೆಯ ಹೆಸರು	ವರ್ಷ	ಮೊತ್ತ
1.	ಕರ್ನಾಟಕ ಸಹಕಾರಿ ಸಕ್ಕರೆ ಕಾರ್ಖಾನೆ (ಲಿ)	1998–1999	02.00
2.	ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ (ನಿ)	1999–2000	29.23

3.	ಗೋದಾವರಿ ಸಕ್ಕರೆ ಕಾರ್ಖಾನೆ (ಲಿ) ಚಿಕ್ಕೋಡಿ ವಿಭಾಗ	1999–2000	32.69
4.	ರೈತರ ಸಹಕಾರಿ ಸಕ್ಕರೆ ಕಾರ್ಖಾನೆ (ಲಿ)	1999–2000	17.00
5.	ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ(ಲಿ)	1999–2000	43.40
6.	ಐ,ಎಸ್,ಆರ್. ಶುಗರ್ಸ್ (ಲಿ)	2000–2001	14.18
7.	ಶ್ಯಾಮನೂರು ಶುಗರ್ಸ್ (ಲಿ)	2000–2001	21.28
	ಒಟ್ಟು		**159.78.**

ಮೇಲೆ ಓದಲಾದ (2) ರಲ್ಲಿರುವ ಸರ್ಕಾರದ ಆದೇಶದಲ್ಲಿ 2008–09ನೇ ಸಾಲಿಗೆ ಈ ಉದ್ದೇಶಕ್ಕಾಗಿ ರೂ.160/–ಲಕ್ಷಗಳ ಅನುದಾವನ್ನು ಇಲಾಖೆಯ ಲೆಕ್ಕ ಶೀರ್ಷಿಕೆ 4860-04-800-0-01-Plan-172 Roads ಅಡಿಯಲ್ಲಿ ಒದಗಿಸಲಾಗಿದೆ. ಸದರಿ ಹಣದಲ್ಲಿ ರೂ. 159.78 ಲಕ್ಷಗಳನ್ನು ಬಿಡುಗಡೆ ಮಾಡಲು ಸಕ್ಕರೆ ನಿರ್ದೇಶಕರು ಉಲ್ಲೇಖ(1) ರಲ್ಲಿನ ಪತ್ರದಲ್ಲಿ ಕೋರಿರುತ್ತಾರೆ.

2008–09ನೇ ಸಾಲಿನಲ್ಲಿ ಒದಗಿಸಲಾಗಿದ್ದ ರೂ.160/– ಲಕ್ಷಗಳ ಅನುದಾನದಲ್ಲಿ ಮೊದಲನೇ ಮತ್ತು 2ನೇ ಕಂತುಗಳಲ್ಲಿ ತಲಾ ರೂ.40/– ಲಕ್ಷದಂತೆ ಒಟ್ಟು ರೂ.80/–ಲಕ್ಷಗಳನ್ನು ಪ್ರಸ್ತಾವನೆಯಲ್ಲಿ ನಮೂದಿಸಿರುವ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಕಾಮಗಾರಿಗಳಿಗೆ ಆದ್ಯತೆ ಮೇಲೆ ಬಿಡುಗಡೆ ಮಾಡುವ ಸಲುವಾಗಿ ಆಯುಕ್ತರು ಕಬ್ಬು ಅಭಿವೃದ್ಧಿರವರಿಗೆ ಮೇಲೆ ಓದಲಾದ (3) ಮತ್ತು (4) ರಲ್ಲಿನ ಆದೇಶಗಳಲ್ಲಿ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (1)ರ ಆಯುಕ್ತರು ಕಬ್ಬು ಅಭಿವೃದ್ಧಿರವರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಪ್ರಸ್ತಾವನೆಯಲ್ಲಿ ನಮೂದಿ ಸಿರುವ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಕಾಮಗಾರಿಗಳಿಗೆ ಆದ್ಯತೆ ಮೇರೆಗೆ ಬಿಡುಗಡೆ ಮಾಡುವ ಸಲುವಾಗಿ ಬಾಕಿ ಉಳಿದ ರೂ.79.78 ಲಕ್ಷಗಳನ್ನು ಬಿಡುಗಡೆ ಮಾಡಲು ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಐ 93 ಎಸ್‌ಜಿಎಫ್ 2008, ಬೆಂಗಳೂರು, ದಿನಾಂಕ: 22–10–2008

ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಪ್ರಸ್ತಾವನೆಯಲ್ಲಿ ಕೋರಿರುವಂತೆ ರಾಜ್ಯದ 7 ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಬರುವ ರಸ್ತೆಗಳನ್ನು ಅಭಿವೃದ್ಧಿ ಪಡಿಸುವ ಕ್ರಿಯಾ ಯೋಜನೆಯನ್ನು ಕಾರ್ಯಗತಗೊಳಿಸಲು 2008–09ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 4860–04–800–0–01–(ಯೋಜನೆ)–172–ರಸ್ತೆಗಳ ಅಡಿ ಒದಗಿಸಲಾಗಿರುವ ರೂ.160/– ಲಕ್ಷಗಳ ಅನುದಾನದಲ್ಲಿ ರೂ.80.00 ಲಕ್ಷಗಳನ್ನು ಮೇಲೆ ಓದಲಾದ(3) ಮತ್ತು (4) ರ ಆದೇಶಗಳಲ್ಲಿ ಈಗಾಗಲೇ ಬಿಡುಗಡೆಗೊಳಿಸಲಾಗಿದ್ದು, ಮತ್ತೆ ರೂ.79.78 ಲಕ್ಷಗಳನ್ನು (ಎಪ್ಪತ್ತೋಂಬತ್ತು ಲಕ್ಷ ಎಪ್ಪತ್ತೆಂಟು ಸಾವಿರ ರೂ.ಗಳು ಮಾತ್ರ) ಪ್ರಸ್ತಾವನೆಯಲ್ಲಿ ನಮೂದಿಸಿರುವ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಕಾಮಗಾರಿಗಳಿಗೆ ಆದ್ಯತೆ ಮೇರೆಗೆ ಬಿಡುಗಡೆ ಮಾಡುವ ಸಲುವಾಗಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರುರವರಿಗೆ ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಎಫ್‌ಡಿ 866 ವೆಚ್ಚ-1/2008, ದಿನಾಂಕ: 10–07–2008 ರಲ್ಲಿ ನೀಡಲಾದ ಸಹಮತಿಯಂತೆ ಹಾಗೂ ಎಫ್‌ಡಿ 01 ಟಿಎಫ್‌ಪಿ 2008, ದಿನಾಂಕ: 16–05–2008 ರಲ್ಲಿ ಸರ್ಕಾರದ ಆಡಳಿತ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಪಿ.ಆನಂದ್ ಕುಮಾರ್
ಪೀಠಾಧಿಕಾರಿ (ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.